549 ಶ್ರೀ ಮಾನಪ್ಪ ವಜ್ಜಲ್ (ಲಿಂಗಸುಗೂರು) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಜಿಲ್ಲೆ ಲಿಂಗಸುಗೂರು ತಾಲ್ಲೂಕಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಛೇರಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ನೂತನ ಕಛೇರಿಯನ್ನು ಪ್ರಸಕ್ತ ವರ್ಷದಲ್ಲಿ ಮಂಜೂರಾತಿಗೆ ಅನುಮತಿ ನೀಡಿದೆಯೇ ಮಾಹಿತಿ ನೀಡುವುದು?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಬಂದಿದೆ.

ಆ) ಲಿಂಗಸುಗೂರಿನಲ್ಲಿ ಹಾಲಿ ಶಿಶು ಅಭಿವೃದ್ಧಿ ಯೋಜನೆಯು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಶಿಶು ಅಭಿವೃದ್ಧಿ ಯೋಜನಾ ಕಛೇರಿಯ ಕಟ್ಟಡ ಕಟ್ಟಲು ಅನುದಾನ ಲಭ್ಯವಾದ ನಂತರ ಕ್ರಮ ಕೈಗೊಳ್ಳ ಲಾಗುವುದು.

526 ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಸಾಲಿನಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾಪ ಸರ್ಕಾರಕ್ಕಿದೆಯೇ;

ಆ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗಡಿ ಗ್ರಾಮವಾದ ಕಾಮಲಾಪು ರದಲ್ಲಿ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆಯ ಅವಶ್ಯಕತೆಯಿ ರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಸಾಲಿನಲ್ಲಿಯೆ ಈ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲಾಗುವುದೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವ ಪ್ರಸ್ತಾಪ ಇರುವುದಿಲ್ಲ.

ಆ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆಯು 2001 ರ ಜನಗಣತಿ ಪ್ರಕಾರ 1,87.179 ಆಗಿದೆ. ಮಾರ್ಗಸೂಚಿಗಳ ಪ್ರಕಾರ ಪ್ರತಿ 30.000 ಜನಸಂಖ್ಯೆಗೆ ಒಂದರಂತೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅವಕಾಶವಿದೆ. ಅದರ ಪ್ರಕಾರ 6 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಈ ತಾಲ್ಲೂಕಿಗೆ ಮಂಜೂರು ಮಾಡಬಹುದಾಗಿದ್ದರೂ, ಈಗಾಗಲೇ ಅಲ್ಲಿ 14 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಆದುದರಿಂದ, ಈ ತಾಲ್ಲೂಕಿನಲ್ಲಿ ಇನ್ನೂ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

358 ಶ್ರೀ ರೋಷನ್ ಬೇಗ್ ಆರ್. (ಶಿವಾಜಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಹೊರವಲಯದಲ್ಲಿ ಹೊಸದಾಗಿ ಸರಕಾರಿ ಆಸ್ಪತ್ರೆಗಳನ್ನು ಸ್ಥಾಪಿಸುವ ಉದ್ದೇಶ ಸರಕಾರದ ಮುಂದಿದೆಯೇ;

ಆ) ಬೆಂಗಳೂರು ಹೊರವಲಯದಲ್ಲಿ ಸರಕಾರಿ ಆಸ್ಪತ್ರೆ ಸ್ಥಾಪಿಸಲು ಉದ್ದೇಶಿಸಿರುವ ಸ್ಥಳಗಳನ್ನು ಗುರುತಿಸಲಾಗಿದೆಯೇ;

ಇ) ಈ ಯೋಜನೆಗಾಗಿ ಸರಕಾರವು ನಿಗದಿಪಡಿಸಿರುವ ಅಂದಾಜು ವೆಚ್ಚವೆಷ್ಟು;

ಈ) ಪ್ರತಿಯೊಂದು ಆಸ್ಪತ್ರೆಗೆ ನಿಗದಿ ಪಡಿಸಿದ ಹಾಸಿಗೆಯ ಸಂಖ್ಯೆಯೆಷ್ಟು; ಎಂಬ ಪೂರ್ಣ ಮಾಹಿತಿಯನ್ನು ಮಾನ್ಯ ಸಚಿವರು ಉತ್ತರಿಸುವರೆ?